# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಮಂಜುನಾಥ ಬಂಡಾರಿ |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1118 |
| ಉತ್ತರಿಸಬೇಕಾದ ದಿನಾಂಕ | : | 15.12.2023 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯ ಸ್ವತಂತ್ರ ಹಾಗೂ ಇತರ ಸಂಸ್ಥೆಗಳು ಯಾವುವು: ಈ ಎಲ್ಲಾ ಸಂಸ್ಥೆಗಳು ತಮ್ಮದೇ ಆದ ವೇತನ ಲೆಕ್ಕಶೀರ್ಷಿಕೆ ಎಚ್.ಆರ್.ಎಂ.ಎಸ್ ಲಾಗಿನ್ ಮತ್ತು ವೃಂದ ಹಾಗೂ ನೇಮಕಾತಿ ನಿಯಮಗಳನ್ನು ಹೊಂದಿವೆಯೇ: (ವಿವರ ನೀಡುವುದು) | ಹೌದು,<br>ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯ ಸ್ವತಂತ್ರ ಹಾಗೂ ಇತರ ಸಂಸ್ಥೆಗಳ HRMS Log in ಹಾಗೂ ವೇತನ ಲೆಕ್ಕಶೀರ್ಷಿಕೆಯ ವಿವರ.<br>**A.** 1. **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಗದಗ.**<br>2. ಲೆಕ್ಕಶೀರ್ಷಿಕೆ: 2515-00-102-0-13-101 ವೇತನಗಳು.<br>3. HRMS login: ವಿಶ್ವವಿದ್ಯಾಲಯ ಲಾಗಿನ್ ಮತ್ತು ಪಾಸವರ್ಡ್ ಹಾಗೂ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಹೊಂದಿರುತ್ತದೆ.<br><br>**B.** 1. **ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ.**<br>2. ಲೆಕ್ಕಶೀರ್ಷಿಕೆ: (i) 2515-00-102-0-08-101<br>(ii) 2515-00-102-0-08-103<br>(iii) 2515-00-102-0-08-115<br>3. HRMS login: ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯು ಲಾಗಿನ್ ಮತ್ತು ಪಾಸವರ್ಡ್ ಹೊಂದಿರುತ್ತದೆ. ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಸದರಿ ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ.<br><br>**C. ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ.**<br>(i) ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಕಾರ್ಯನಿರ್ವಹಿಸುತ್ತಿದೆ.<br><br>ಪ್ರಸ್ತುತ ಈ ಸಂಸ್ಥೆಯ ಲೆಕ್ಕ ಶೀರ್ಷಿಕೆಯನ್ನು ಮಹಾತ್ಮ |

| | | |
|---|---|---|
| | | ಗಾಂಧೀ ಇನ್ಸಿಟ್ಯುಟ್ ಆಫ್ ರೂರಲ್ ಎನರ್ಜಿ ಅಂಡ್ ಡೆವಲಪಮೆಂಟ್ (MGIRED) ಸಂಸ್ಥೆಯೊಂದಿಗೆ ಏಕೀಕೃತಗೊಳಿಸಲಾಗಿದೆ.<br><br>ಪ್ರಸ್ತುತ ಈ ಸಂಸ್ಥೆಯಲ್ಲಿ ಸರ್ಕಾರದಿಂದ ನಿಯೋಜನೆ, ಸಮಾಲೋಚಕರು (Consultant) ಹಾಗೂ ಸಿಬ್ಬಂದಿಗಳು ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದು, ಸದರಿ ಸಂಸ್ಥೆಯು ಸಿ ಅಂಡ್ ಆರ್ ನಿಯಮಾವಳಿಗಳನ್ನು ಹಾಗೂ ಹೆಚ್.ಆರ್.ಎಂ.ಎಸ್ ಲಾಗಿನ್ ಹೊಂದಿರುವುದಿಲ್ಲ.<br><br>**D. ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ.**<br>(i) ಈ ಸಂಸ್ಥೆಯು ಸ್ವಾಯತ್ತ ಸಂಸ್ಥೆಯಾಗಿರುತ್ತದೆ ಹಾಗೂ ಪ್ರತ್ಯೇಕ ಲೆಕ್ಕ ಶೀರ್ಷಿಕೆಯನ್ನು ಹೊಂದಿರುತ್ತದೆ. ಈ ಸಂಸ್ಥೆಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಿರುವುದಿಲ್ಲ. ಆದರೆ ಅವಶ್ಯಕತೆ ಆಧಾರದ ಮೇರೆಗೆ ಸಿಬ್ಬಂದಿಗಳನ್ನು ಗುತ್ತಿಗೆ ಮತ್ತು ಹೊರಗುತ್ತಿಗೆಯಲ್ಲಿ ಒಂದರಿಂದ ಮೂರು ವರ್ಷಗಳವರೆಗೆ ನೇಮಕ ಮಾಡಿಕೊಂಡು ಸಂಸ್ಥೆಯ ತರಬೇತಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ<br>(ii) ಈ ಸಂಸ್ಥೆಯಲ್ಲಿ ನೇರವಾಗಿ ಸರ್ಕಾರಿ ಹುದ್ದೆಗಳಿಗೆ ನೇಮಕಾತಿಯನ್ನು ಮಾಡುತ್ತಿಲ್ಲ. ಆದರೆ ಸರ್ಕಾರಿ ನೌಕರರು ವರ್ಗಾವಣೆ ಮತ್ತು ನಿಯೋಜನೆಯ ಮೇಲೆ ಬಂದಿರುತ್ತಾರೆ. |
| ಆ) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ತಳಹಂತದ ಜನಪ್ರತಿನಿಧಿಗಳು, ಅಧಿಕಾರಿಗಳು ವಿವಿಧ ರೀತಿಯ ಪಾಲುದಾರರಿಗೆ ತರಬೇತಿ ನೀಡುವ SIRD ತನ್ನದೇ ಆದ ವೇತನ ಲೆಕ್ಕಶೀರ್ಷಿಕೆ, HRMS Log in ಮತ್ತು ವೃಂದ ಹಾಗೂ ನೇಮಕಾತಿ ನಿಯಮಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಯಾವಾಗ ಈ ಸಂಸ್ಥೆಗೆ ಮತ್ತು C&R ಇಲ್ಲದ ಇತರ ಸಂಸ್ಥೆಗಳಿಗ ಈ ಮೇಲಿನ ಸೌಲಭ್ಯಗಳನ್ನು ಒದಗಿಸಲಾಗುವುದು (ವಿವರ ನೀಡುವುದು) | • 2515-00-102-0-08-101<br>• 2515-00-102-0-08-103<br>• 2515-00-102-0-08-115<br><br>ಸಂಸ್ಥೆಗೆ ಮೇಲ್ಕಂಡ ಲೆಕ್ಕಶೀರ್ಷಿಕೆಗೆ ವೇತನ ಸಂಬಂಧ ಅನುದಾನವನ್ನು ಸರ್ಕಾರದಿಂದ ಬಿಡುಗಡೆಗೊಳಿಸಲಾಗುತ್ತಿರುತ್ತದೆ ಅಲ್ಲದೇ ಲೆಕ್ಕಶೀರ್ಷಿಕೆ ಸಂಖ್ಯೆ: 2515-00-102-0-08-101 ರಡಿಯಲ್ಲಿ ಸರ್ಕಾರಿ ಅಧಿಕಾರಿಗಳಿಗೆ ಮತ್ತು ನೌಕರರುಗಳಿಗೆ ವೇತನವನ್ನು ಹೆಚ್.ಆರ್.ಎಂ.ಎಸ್ ತಂತ್ರಾಂಶದ ಮೂಲಕ ಸೆಳೆಯಲು ಪ್ರತೇಕ ಲಾಗಿನ್ ನೀಡಿದ್ದು ಮಾರ್ಚ್-2022 ಮಾಹೆಯಿಂದ ವೇತನವನ್ನು ಹೆಚ್.ಆರ್.ಎಂ.ಎಸ್ ತಂತ್ರಾಂಶದ ಮೂಲಕ ಸೆಳೆದು ಪಾವತಿಸಲಾಗುತ್ತಿರುತ್ತದೆ.<br><br>ಮುಂದುವರೆದು, ಸಂಸ್ಥೆಯಲ್ಲಿ ವೃಂದ ಮತ್ತು ನೇಮಕಾತಿ ಸಂಬಂಧ ಈಗಾಗಲೇ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |
| ಇ) | ವೃಂದ ಹಾಗೂ ನೇಮಕಾತಿ ನಿಯಮಗಳು ರಚನೆಯಾಗದಿರುವ ಈ ಸಂಸ್ಥೆಗಳು ಹೇಗೆ ಕಾರ್ಯನಿರ್ವಹಿಸುತ್ತಿವೆ: ಈ ಕಾರಣದಿಂದಾಗಿ ಗ್ರಾಮೀಣಾಭಿವೃದ್ಧಿ ಇಲಾಖೆಯ ಬೆನ್ನೆಲುಬಾಗಿರುವ ತರಬೇತಿ ಸಂಸ್ಥೆಯಲ್ಲಿ | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯವು ಅದರ ಕಾರ್ಯ ನಿರ್ವಹಣೆಗೆ ಅಗತ್ಯವಾಗಿರುವ ಬೋಧಕ ಮತ್ತು ಬೋಧಕೇತರ ವೃಂದಗಳಿಗೆ ನೇಮಕಾತಿ ಮಾಡಲು ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಿಕೊಂಡಿರುತ್ತದೆ. ಅಬ್ದುಲ್ ನಜೀರ್ |

| | | |
|---|---|---|
| | ಇತರ ಇಲಾಖೆಯ ಅಧಿಕಾರಿಗಳು ನಿಯೋಜನೆಯಾಗಿ ತರಬೇತಿ ಮತ್ತು ಆಡಳಿತ ಹಾಗೂ ಇಲಾಖೆಯ ಕಾರ್ಯಕ್ರಮ ಅನುಷ್ಠಾನದಲ್ಲಿ ವ್ಯತ್ಯಯವಾಗುತ್ತಿದ್ದು, ಈ ಅನ್ಯ ಇಲಾಖೆಯ ಅಧಿಕಾರಿ/ ಸಿಬ್ಬಂದಿಗಳ ನಿಯೋಜನೆಯನ್ನು ರದ್ದುಪಡಿಸಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳನ್ನು ಯಾವಾಗ ನೇಮಿಸಲಾಗುವುದು ಅಥವಾ ನಿಯೋಜಿಸಲಾಗುವುದು: (ವಿವರ ನೀಡುವುದು) | ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯೂ ಸಹ ಚುನಾಯಿತ ಪ್ರತಿನಿಧಿಗಳಿಗೆ ಹಾಗೂ ಇಲಾಖೆಯ ಅಧಿಕಾರಿ ಮತ್ತು ನೌಕರರುಗಳಿಗೆ ಅಭಿವೃದ್ಧಿ ಕಾರ್ಯಕ್ರಮಗಳು ಹಾಗೂ ಪಂಚಾಯತ್ ರಾಜ್ ವ್ಯವಸ್ಥೆಯ ಬಗ್ಗೆ ಸಾಮಾಥ್ರ್ಯಾಭಿವೃದ್ಧಿ ತರಬೇತಿಯನ್ನು ಹಾಗೂ ಪುನಶ್ಚೇತನ ತರಬೇತಿಗಳನ್ನು ಆಯೋಜಿಸಲಾಗುತ್ತಿದೆ. ಈ ಜವಾಬ್ದಾರಿ ನಿರ್ವಹಿಸಲು ಅವಶ್ಯವಿರುವ ಉನ್ನತ ವ್ಯಾಸಂಗವುಳ್ಳ ಅನುಭವಿ ಪರಿಣಿತರನ್ನು faculty ಹುದ್ದೆಗೆ ನೇಮಿಸಿಕೊಳ್ಳಲಾಗುತ್ತಿದ್ದು, ಇಲಾಖೆಯಲ್ಲಿ ಬಹಳ ವರ್ಷಗಳು ಸೇವೆ ಸಲ್ಲಿಸಿರುವ ಹಿರಿಯ ಅಧಿಕಾರಿಗಳ ಸೇವೆಯನ್ನೂ ಸಹ ನಿಯೋಜನೆ ಮೇರೆ ಪಡೆಯಲಾಗುತ್ತಿದೆ. ಇದೇ ರೀತಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಹಾಗೂ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯಲ್ಲಿನ ತರಬೇತಿಗಳನ್ನು ನಿರ್ವಹಿಸಲಾಗುತ್ತಿದೆ. |
| ಈ) | ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಈವರೆಗೆ ವಿವಿಧ ಬೇಡಿಕೆ ಈಡೇರಿಕೆಗಾಗಿ ಜನಪ್ರತಿನಿಧಿ/ ಅಧಿಕಾರಿ/ ಗ್ರಾಮ ಪಂಚಾಯತ್ ಸಿಬ್ಬಂದಿ ಸಂಘಟಣೆಗಳು ಮತ್ತಿತರರು ಸಲ್ಲಿಸಿದ ಮನವಿಗಳಾವುವು: ಅವುಗಳನ್ನು ಈಡೇರಿಸುವ ಅಥವಾ ನಿರಾಕರಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ಮನವಿವಾರು ವಿವರ ನೀಡುವುದು) | ಗ್ರಾಮ ಪಂಚಾಯತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಮತ್ತು ಸದಸ್ಯರುಗಳ ವಿವಿಧ ತಾಲ್ಲೂಕು ಮಟ್ಟದ ಒಕ್ಕೂಟಗಳು ಸರ್ಕಾರಕ್ಕೆ ಆಗಿಂದಾಗ್ಗೆ ವಿವಿಧ ಬೇಡಿಕೆಗಳನ್ನು ಆಧರಿಸಿ ಮನವಿ ಸಲ್ಲಿಸಿರುತ್ತಾರೆ. ಇವುಗಳಲ್ಲಿ ಪ್ರಮುಖವಾಗಿ ಮಾಸಿಕ ಗೌರವಧನ, ಉಪವೇಶನ ಶುಲ್ಕ ಹಾಗೂ ಮಾಸಿಕ ಬಸ್ ಪಾಸ್ ವಿತರಿಸುವ ಬಗ್ಗೆ ಪ್ರಸ್ತಾಪಿಸಲಾಗಿದೆ.<br><br>ಮಾಸಿಕ ಗೌರವಧನವನ್ನು ಗ್ರಾಮ ಪಂಚಾಯಿತಿಗಳ ಅಧ್ಯಕ್ಷರಿಗೆ ರೂ. 6000/-, ಉಪಾಧ್ಯಕ್ಷರಿಗೆ ರೂ. 4000/- ಹಾಗೂ ಸದಸ್ಯರಿಗೆ ರೂ.2000/-ಗಳಂತೆ ಪರಿಷ್ಕೃತ ಗೌರವಧನ ಹಾಗೂ ಉಪವೇಶನ ಶುಲ್ಕ ರೂ 300 ಗಳನ್ನು ಪಾವತಿಸಲಾಗುತ್ತಿದೆ. ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳು ಗ್ರಾಮ ಪಂಚಾಯತಿ ಕೆಲಸಗಳ ನಿಮಿತ್ತ ಗ್ರಾಮ ಪಂಚಾಯತಿ ಪರಿಮಿತಿಗಳಾಚೆ ಮಾಡಿದ ಪ್ರಯಾಣಗಳಿಗಾಗಿ "ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತ್ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರುಗಳ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ) ನಿಯಮಗಳು, 1994"ರನ್ವಯ ಪ್ರಯಾಣ ವೆಚ್ಚ ಹಾಗೂ ದಿನ ಭತ್ಯೆಗಳನ್ನು ಗ್ರಾಮ ಪಂಚಾಯತಿಗಳಿಂದ ಪಡೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.<br><br>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿವಿಧ ಅಧಿಕಾರಿ/ನೌಕರರ ಸಂಘಗಳ ಬೇಡಿಕೆಗೆ ಸಂಬಂಧಿಸಿದಂತೆ ಸ್ವೀಕರಿಸಲಾದ ಮನವಿಗಳಲ್ಲಿನ ಬೇಡಿಕೆಗಳ ಸಂಖ್ಯೆ, ಈಡೇರಿಸಲಾಗಿರುವ ಬೇಡಿಕೆಗಳ ಸಂಖ್ಯೆ ಹಾಗೂ ಪರಿಶೀಲನಾ ಹಂತದಲ್ಲಿರುವ ಬೇಡಿಕೆಗಳ ಸಂಖ್ಯೆಯ ಪಟ್ಟಿಯನ್ನು ಇದರೊಂದಿಗೆ ಲಗತ್ತಿಸಿದೆ. |

**ಸಂಖ್ಯೆ: ಗ್ರಾಅಪ/1118/ಎಲ್‌ಎಕ್ಯು/2ನೇಅ/2023/**

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು